ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಚೇರಿ, ವಾರ್ಡ್ ಸಂಖ್ಯೆ-183 ಚಿಕ್ಕಲ್ಲಸಂದ್ರ, ಬೆಂಗಳೂರು

---

ಸಂ: ಸ.ಅ/ವಾ-183/ಸ.ಅ/03/2021-22 ದಿನಾಂಕ : 07-07-2021

## <u>ವಾರ್ಡ್ ಸಮಿತಿ (ಜುಲೈ) ವಾರ್ಡ್ ಸಂಖ್ಯೆ-183 ಚಿಕ್ಕಲ್ಲಸಂದ್ರ ವಾರ್ಡಿನ ದಿನಾಂಕ 10-06-2021 ರಂದು ನಡೆದ ಸಭೆಯ ನಡಾವಳಿಗಳು</u>

ವಿಷಯ:- ವಾರ್ಡ್ ಸಂಖ್ಯೆ-183 ಚಿಕ್ಕಲ್ಲಸಂದ್ರ ಬಿ.ಡಿ.ಎ ಮುಖ್ಯರಸ್ತೆಯಲ್ಲಿರುವ ಯೋಗ ಕೇಂದ್ರದಲ್ಲಿ ನಡೆದ ವಾರ್ಡ್ DETER ಸಮಿತಿ (WDC)ಸಭೆಯ ನಡಾವಳಿ.

ಉಲ್ಲೇಖ:-1. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಂ RD 158 TNR 2020 ದಿನಾಂಕ 07-05-2021

******

ಉಲ್ಲೇಖ (1) ರ ಸಭಾ ಸೂಚನಾ ಪತ್ರದ ಅನುಸಾರ ಆದೇಶದ ಅಂಶಗಳನ್ನು ಪಾಲಿಸಲು ವಾರ್ಡ್ ಸಮಿತಿ ಸಭೆ ನಿಗದಿಪಡಿಸಿ ದಿನಾಂಕ 07-07-2021 ರಂದು ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ-183 ರವರಾದ ಶ್ರೀ ರಾಘವೇಂದ್ರಚಾರಿ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳು, ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಷನ್ ಹಾಗೂ ಸಾರ್ವಜನಿಕರನ್ನು ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ

ಶ್ರೀ ನಾಗೇಂದ್ರಸ್ವಾಮಿ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರೊಂದಿಗೆ ಮಾತನಾಡಿ ವಾರ್ಡ್ ಮಟ್ಟದಲ್ಲಿ ಕೋವಿಡ್-19 ಅನ್ನು ನಿಯಂತ್ರಿಸಲು ಸರ್ಕಾರದ ಆದೇಶದಂತೆ DETER ಸಮಿತಿ (WDC) ರಚಿಸಲಾಗಿದ್ದು, ವಾರ್ಡ್ ಮಟ್ಟದಲ್ಲಿ ಕೋವಿಡ್ ನಿಯಂತ್ರಿಸಲು ವಾರ್ಡ್ ಕೋವಿಡ್ ಸ್ವಯಂ ಸೇವಕರನ್ನಾಗಿ ನೇಮಿಸಿಕೊಳ್ಳಲು ಸೂಚಿಸಿರುತ್ತಾರೆ ಹಾಗೂ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 2 ಟ್ರಯಾಜ್ ಸೆಂಟರ್‌ಗಳನ್ನು ಪ್ರಾರಂಭಿಸಲು ಉಲ್ಲೇಖ (1) ರಲ್ಲಿ ಸೂಚಿಸಿರುವ ಮೇರೆಗೆ ಹೊಸಕೆರೆಹಳ್ಳಿಯಲ್ಲಿ ಹೊಸದಾಗಿ ನಿರ್ಮಿಸಿರುವ ಆಸ್ಪತ್ರೆಯಲ್ಲಿ ಆಮ್ಲಜನಕ ಸಹಿತ ಇರುವ ಹಾಗೂ ಕುಮಾರಸ್ವಾಮಿ ಬಡಾವಣೆಯ ನಾಗರ್ ಆಸ್ಪತ್ರೆ ಎದುರು ಒಟ್ಟು 2 ಟ್ರಯಾಜ್ ಸೆಂಟರ್ ಆಸ್ಪತ್ರೆಗಳು ಕಾರ್ಯ ನಿರ್ವಹಿಸುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ವಾರ್ಡ್‌ನ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳುವಂತೆ ವಾರ್ಡ್ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರು ವಾರ್ಡ್ ಸಭೆಗೆ ತಿಳಿಸಿದರು.

ವಾರ್ಡ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಕೋವಿಡ್ ಟೆಸ್ಟಿಂಗ್ ಮಾಡಿಸಿಕೊಳ್ಳುವಂತೆ ವಾರ್ಡ್ ಸಮಿತಿ ಸಭೆಯಲ್ಲಿ ಮನವಿ ಮಾಡಿದರು.

ಚಿಕ್ಕಲ್ಲಸಂದ್ರ ವಾರ್ಡ್‌ನ ಲಸಿಕೆಯನ್ನು ನೀಡುವ ವ್ಯವಸ್ಥೆ ಮಾಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರನ್ನು ಕೋರಿದಾಗ ವಾರ್ಡ್ 183 ರ ಪ್ರದೇಶದ ವ್ಯಾಪ್ತಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಕೇಂದ್ರ ಚೆನ್ನಮ್ಮನ ಅಚ್ಚುಕಟ್ಟು ಪ್ರದೇಶದ ಆಸ್ಪತ್ರೆಯಲ್ಲಿ ನಾಗರೀಕರಿಗೆ ಲಸಿಕೆಯನ್ನು ನೀಡಲಾಗುತ್ತಿದ್ದು, ಲಸಿಕೆ ನೀಡುವ ಕಾರ್ಯಕ್ರಮವನ್ನು ಬಿ.ಡಿ.ಎ ಮುಖ್ಯರಸ್ತೆಯಲ್ಲಿರುವ ಯೋಗಾ ಕೇಂದ್ರದಲ್ಲಿ ಆಯೋಜಿಸಿಕೊಳ್ಳುವಂತೆ ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ ಸಭೆಗೆ ಸೂಚಿಸಿದರು.

Scanned by CamScanner

ಭುವನೇಶ್ವರಿನಗರ ಉಧ್ಯಾನವನದ ಎದುರು ಇರುವ ಟ್ರಾನ್ಸ್‌ಫಾರ್ಮರ್‌ನ ಮೇಲೆ ಇರುವ ಮರದ ಕೊಂಬೆಗಳನ್ನು ಕತ್ತರಿಸುವಂತೆ ಹಾಗೂ ಭುವನೇಶ್ವರಿನಗರದ ಉಧ್ಯಾನವನದ ಒಳಗೆ ಇರುವ ಮರಗಳಲ್ಲಿ ಒಣಗಿದ ಕೊಂಬೆಗಳು ಇದ್ದು, ಅವುಗಳನ್ನು ತೆರವುಗೊಳಿಸದಿರುವ ಬಗ್ಗೆ ಮಾನ್ಯ ಅಧ್ಯಕ್ಷರ ಮಾತನಾಡಿ ಮುಂದಿನ ವಾರ್ಡ್ ಸಮಿತಿ ಸಭೆಯೊಳಗೆ ತೆರವುಗೊಳಿಸದಿದ್ದ ಪಕ್ಷದೊಳಗೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದೆಂದು ವಾರ್ಡ್ ಸಮಿತಿ ಸಭೆಯಲ್ಲಿ ತಿಳಿಸಲಾಗಿದ್ದರ ಮೇರೆಗೆ ದೂರವಾಣಿ ಮುಖಾಂತರ ಶ್ರೀ ಹರೀಶ್ ಹೆಚ್.ಆರ್ ರವರೊಂದಿಗೆ ಮತ್ತೊಮ್ಮೆ ಮಾತನಾಡಿ ಕೂಡಲೇ ಒಣಗಿದ ಮರದ ಕೊಂಬೆಗಳನ್ನು ತೆರವುಗೊಳಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸಂಖ್ಯೆ-183 ರಲ್ಲಿ ಉಧ್ಯಾನವನಗಳಲ್ಲಿ ಕಾಮಗಾರಿಯನ್ನು ಮಾಡಲಾಗುತ್ತಿದ್ದು, ಅದಷ್ಟು ಬೇಗ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರ ವಾಯುವಿಹಾರಕ್ಕೆ ಅನುಕೂಲ ಮಾಡಿಕೊಡಲು ಮಾನ್ಯ ಅಧ್ಯಕ್ಷರವರು ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ದಕ್ಷಿಣ ರವರ ಕಛೇರಿ ಗಮನಕ್ಕೆ ತಂದು ಕೂಡಲೇ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ದೂರವಾಣಿ ಮುಖಾಂತರ ಮತ್ತೊಮ್ಮೆ ಸೂಚಿಸಿ ಕಾಮಗಾರಿಯನ್ನು ಕೂಡಲೇ ಮುಗಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಮಾಡಲು ಸಭೆಗೆ ತಿಳಿಸಿದರು.

ಕೋವಿಡ್-19 3ನೇ ಅಲೆಯು ಹರಡಬಹುದೆಂಬ ತಜ್ಞರ ಸಲಹೆಯಂತೆ ಮುಂಜಾಗ್ರತಾ ಕ್ರಮ ವಹಿಸಲು ಈಗಾಗಲೇ ವಾರ್ಡ್ ಸಂಖ್ಯೆ-161 ರಲ್ಲಿ ನಿರ್ಮಿಸಲಾಗುತ್ತಿರುವ ಸಮುದಾಯ ಭವನವನ್ನು ಮಕ್ಕಳ ಕೋವಿಡ್ ಸ್ಥಿರೀಕರಣ ಕೇಂದ್ರವಾಗಿ (ಆಮ್ಲಜನಕ ಸಹಿತ) ಮಾರ್ಪಾಡು ಮಾಡುವ ಬಗ್ಗೆ ಚರ್ಚೆ ಕಾರ್ಯ ರೂಪಕ್ಕೆ ತರಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ಸದರಿ ಕಾಮಗಾರಿಯು ಪ್ರಗತಿಯಲ್ಲಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಪದ್ಮನಾಭನಗರ ಉಪ ವಿಭಾಗರವರು ವಾರ್ಡ್ ಸಮಿತಿ ಸಭೆಗೆ ವಿವರಿಸಿರುತ್ತಾರೆ. ಸಭೆಯಲ್ಲಿದ್ದವರಿಗೆ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಗಿರುತ್ತದೆ.

| | |
|---|---|
| ವಾರ್ಡ್ ಸಮಿತಿ ಸಂಚಾಲಕರು<br>AE-183 | ವಾರ್ಡ್-183 ರ ನೋಡಲ್ ಅಧಿಕಾರಿ. |

Scanned by CamScanner

ವಾರ್ಡ್ ಸಮಿತಿ ಸಭೆಗೆ ಹಾಜರಾಗಿದ್ದ ಅಧಿಕಾರಿಗಳು.

| ಕ್ರಮ ಸಂಖ್ಯೆ | ಹೆಸರು ಮತ್ತು ಹುದ್ದೆ | ಸಹಿ |
|---|---|---|
| 1. | ಆರ್. ಅನಿತ. ಕಿ.ಆ.ಪ. ವಾರ್ಡ್ 183 | [signature] |
| 2. | ಬೋರೇಶ H.R. RFO Forest Dept | ಬೋರೇಶ H.R [signature] |
| 3. | Shivashankar AE/BESCOM | [signature] |
| 4. | K. Venkatesh TI-W-183 | [signature] |
| 5. | Rekha AEE-Projects. | Rekha 7/7/21 |
| 6. | Raghavendra ವಿ OF.183 | [signature] |
| 7. | Chethan N.S. AEE. | [signature] |
| 8. | | |
| 9. | | |
| 10. | | |
| 11. | | |
| 12. | | |
| 13. | | |
| 14. | | |
| 15. | | |
| 16. | | |
| 17. | | |
| 18. | | |
| 19. | | |

Scanned by CamScanner

ವಾಡ್ ಸಮಿತಿ ಸಭೆಗೆ ಹಾಜರಾಗಿದ್ದ  ಸಾವ ಜನಿಕರು.

| ಕ್ರಮ ಸಂಖ್ಯೆ | ಹೆಸರು | ಸಹಿ |
|---|---|---|
| 1. | ವಿ. ವೆಂಕಟೇಶ | ವಿ. ವೆಂಕಟೇಶ |
| 2. | Manini S | [illegible] |
| 3. | | |
| 4. | | |
| 5. | | |
| 6. | | |
| 7. | | |
| 8. | | |
| 9. | | |
| 10. | | |
| 11. | | |
| 12. | | |
| 13. | | |
| 14. | | |
| 15. | | |
| 16. | | |
| 17. | | |
| 18. | | |
| 19. | | |

Scanned by CamScanner